ಛೇರ್ಮನ್ ಈಗ ಸದನವನ್ನು ನಾಳೆ ಬೆಳಿಗ್ಗೆ 11 00 ಗಂಟೆಗೆ ಸೇರುವಂತೆ ಮುಂದೂಡುತ್ತಿದ್ದೇನೆ

(ಸದನವು ಸಂಜೆ 4 ಗಂಟೆ 30 ನಿಮಿಷ 11 ಸೆಕೆಂಡಿಗೆ ಮುಕ್ತಾಯಗೊಂಡು, ಪುನಃ ದಿನಾಂಕ 21ನೇ ಫೆಬ್ರವರಿ, 2007ರ ಬುಧವಾರದಂದು ಬೆಳಿಗ್ಗೆ 11 00 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ–1

979 (1177) ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) ಮಾನ್ಯ ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಹುದ್ದೆಗಳೆಷ್ಟು,

ಆ) ಅದರಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು,

ಇ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) 5652

ಆ) ಗ್ರೇಡ್–1 ವೃಂದದಲ್ಲಿ 158
ಗ್ರೇಡ್–2 ವೃಂದದಲ್ಲಿ 183
ಒಟ್ಟು 341

ಇ) ಖಾಲಿ ಹುದ್ದೆಗಳನ್ನು ಬಡ್ತಿ ಮತ್ತು ನೇರ ನೇಮಕಾತಿ ಮೂಲಕ ತುಂಬಲು ಕ್ರಮ ವಹಿಸಲಾಗುತ್ತಿದೆ

980 (1178) ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ). ಮಾನ್ಯ ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಪ್ರಧಾನ ಮಂತ್ರಿಗಳ ರೋಜ್‌ಗಾರ್ ಯೋಜನೆಗಳ ಅಡಿಯಲ್ಲಿ ಧಾರವಾಡ ಜಿಲ್ಲೆಯಲ್ಲಿ ತೆಗೆದುಕೊಂಡ ರಸ್ತೆಗಳು ಯಾವುವು (ವಿವರ ನೀಡುವುದು),